## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: **2015-16ನೇ** ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ **2012-13ನೇ** ಸಾಲಿಗೆ ಸಂಬಂಧಿಸಿದಂತೆ ಸಾಮಾನ್ಯ ವರ್ಗದಡಿ ಕೇಂದ್ರ ಸಹಾಯಧನ ಬಿಡುಗಡೆ ಕುರಿತು

ಓದಲಾಗಿದೆ: ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: **5-40/2012-BG** ದಿನಾಂಕ **08.12.2014**

### ಪ್ರಸ್ತಾವನೆ :

ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, **2015-16ನೇ** ಸಾಲಿನ ರಾಜ್ಯ ಆಯವ್ಯಯದಡಿ ರೂ.**1256.00** ಲಕ್ಷಗಳನ್ನು ಕೇಂದ್ರ ಹಾಗೂ ರಾಜ್ಯ ಪಾಲಾಗಿ ಒದಗಿಸಿದೆ.

ಮೇಲೆ ಓದಲಾದಂತೆ, ಕೇಂದ್ರ ಸರ್ಕಾರವು **2012-13ನೇ** ಸಾಲಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯ ಸಾಮಾನ್ಯ ವರ್ಗದಡಿ **ರೂ.193.87** ಲಕ್ಷಗಳನ್ನು ಬಿಡುಗಡೆ ಮಾಡಿ ಅಂತಿಮವಾಗಿ ಲೆಕ್ಕಾಚಾರ ಪೂರ್ಣಗೊಳಿಸಿದೆ. ಇದರನ್ವಯ **2012-13ನೇ** ಸಾಲಿನಲ್ಲಿ ನಿರ್ಮಿಸಲಾದ ಜೈವಾನಿಲ ಸ್ಥಾವರಗಳ ಬಾಕಿ ಪಾವತಿಗಾಗಿ ಕೇಂದ್ರ ಸಹಾಯಧನ ಬಿಡುಗಡೆ ಮಾಡಬೇಕಿದೆ. ಆದ್ದರಿಂದ, **2012-13ನೇ** ಸಾಲಿನಲ್ಲಿನ ಪ್ರಗತಿಯನ್ವಯ **ಬಾಗಲಕೋಟೆ ಮತ್ತು ಹಾಸನ ಜಿಲ್ಲೆಗಳಿಗೆ** ಅನುಕ್ರಮವಾಗಿ **ರೂ3.08**ಲಕ್ಷ ಮತ್ತು **ರೂ.6.55** ಲಕ್ಷ ಅಂದರೆ ಒಟ್ಟಾರೆ ರೂ.**9.73** ಲಕ್ಷಗಳ ಕೇಂದ್ರ ಸಹಾಯಧನ ಬಿಡುಗಡೆಗೆ ಬಾಕಿ ಇದ್ದು, ಸದರಿ ಅನುದಾನವನ್ನು **2015-16ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ 2810-60-196-6-01(ಯೋಜನೆ)ರಡಿ ಬಾಗಲಕೋಟೆ ಮತ್ತು ಹಾಸನ** ಜಿಲ್ಲಾ ಪಂಚಾಯಿತಿಗಳಿಗೆ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ/52/ಜೈಅಯೋ/2015 ಬೆಂಗಳೂರು, ದಿನಾಂಕ 11.08.2015**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, **2015-16ನೇ** ಸಾಲಿನಲ್ಲಿ **2012-13ನೇ** ಸಾಲಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯ ಸಾಮಾನ್ಯ ವರ್ಗದಡಿ ಬಿಡುಗಡೆ ಮಾಡಿದ **ರೂ.193.87** ಲಕ್ಷಗಳ ಪೈಕಿ ರೂ.9.73ಲಕ್ಷ(ಒಂಬತ್ತು ಲಕ್ಷದ ಎಪ್ಪತ್ಮೂರು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಕೆಳಕಂಡ ಜಿಲ್ಲಾ ಪಂಚಾಯತ್‌ಗಳಿಗೆ ಕೇಂದ್ರ ಸಹಾಯಧನವನ್ನಾಗಿ ಬಿಡುಗಡೆ ಮಾಡಿ ಆದೇಶಿಸಿದೆ.

| ಕ್ರ.ಸಂ | ಜಿಲ್ಲೆ | ಬಿಡುಗಡೆ ಮಾಡಿದ ಕೇಂದ್ರ ಸಹಾಯಧನ (ರೂ.ಲಕ್ಷಗಳಲ್ಲಿ). |
|---|---|---|
| 1 | ಬಾಗಲಕೋಟೆ | 3.08 |
| 2 | ಹಾಸನ | 6.65 |
| | **ಒಟ್ಟು** | **9.73** |

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿದ್ದು, ಕಾರ್ಯಕ್ರಮದ ಮಾರ್ಗಸೂಚಿಗಳನ್ವಯ ಉದ್ದೇಶಿತ ಯೋಜನೆಗಳಿಗಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಮಾರ್ಗಪಲ್ಲಟ ಮಾಡಬಾರದು ಹಾಗೂ **"ಗಾಂಧಿ ಸಾಕ್ಷಿ ಕಾಯಕ"** ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸಬೇಕು ಎಂಬ ಷರತ್ತಿಗೊಳಪಟ್ಟು ಈ ಅನುದಾನ ಬಿಡುಗಡೆ ಮಾಡಿದೆ.

ಸದರಿ ಅನುದಾನವನ್ನು **ಲೆಕ್ಕ ಶೀರ್ಷಿಕೆ 2810-60-196-6-01(ಯೋಜನೆ)**ರಡಿ ವೆಚ್ಚ ಭರಿಸಿ, ಈ ಅನುದಾನ ಬಳಕೆ ಮಾಡಿಕೊಂಡಿರುವ ಫಲಾನುಭವಿಗಳ ವಿವರಗಳನ್ನು ಹಾಗೂ ನಿಗದಿತ ನಮೂನೆಗಳಲ್ಲಿ ಸಿ.ಎರವರಿಂದ ಆಡಿಟ್ ಮಾಡಿಸಿ ಹಣಬಳಕೆ ಪ್ರಮಾಣ ಪತ್ರವನ್ನು ನೀಡುವುದು.

ಈ ಆದೇಶವನ್ನು ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ : **ಗ್ರಾಅಪ/429 /ಪಿಬಿಎಸ್/2015 ದಿನಾಂಕ 21.07.2015 ರಲ್ಲಿ ಸಹಮತಿಯನ್ನು** ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ ಮತ್ತು ಹಾಸನ
3. ಉಪಕಾರ್ಯದರ್ಶಿ (ಅಭಿವೃದ್ಧಿ) / ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ ಮತ್ತು ಹಾಸನ
4. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
5. ಜಿಲ್ಲಾ ಖಜಾನಾಧಿಕಾರಿಗಳು, ಬಾಗಲಕೋಟೆ ಮತ್ತು ಹಾಸನ.
6. ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7. ಖಜಾನೆಗಳ ನಿರ್ದೇಶಕರು, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಟವರ್, ಬೆಂಗಳೂರು.
8. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರೆನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
9. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು :**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.